# All India Radio: Bangalore
# Regional Bulletin In Kannada
# 24.10.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 24.10.2025 / 2.30 p.m.

<><><><>

ಮುಖ್ಯಾಂಶಗಳು

1. ಕೆಎಸ್‌ಡಿಎಲ್ ನಿಂದ ಸರ್ಕಾರಕ್ಕೆ ೧೩೫ ಕೋಟಿ ರೂಪಾಯಿ ಡಿವಿಡೆಂಡ್ ಚೆಕ್ ಹಸ್ತಾಂತರ
2. ರೈತರು ಗುಣಮಟ್ಟದ ರೇಷ್ಮೆ ಉತ್ಪಾದನೆಗೆ ಆದ್ಯತೆ ನೀಡುವಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕರೆ
3. ದೇಶಾದ್ಯಂತ ೪೦ ಸ್ಥಳಗಳಲ್ಲಿ ರೋಜ್‌ಗಾರ್ ಮೇಳ - ಬೆಂಗಳೂರಿನಲ್ಲೂ ೧೨೦ ಮಂದಿಗೆ ನೇಮಕಾತಿ ಪತ್ರ ವಿತರಣೆ
4. ಕರ್ನೂಲ್ ಬಸ್ ದುರಂತ : ರಾಜ್ಯದ ಪ್ರಯಾಣಿಕರ ಪತ್ತೆಗೆ ತೆರಳಿದ ಅಧಿಕಾರಿಗಳ ತಂಡ

<><><><>

ಸಾರ್ವಜನಿಕ ವಲಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ - ಕೆಎಸ್‌ಡಿಎಲ್ ೨೦೨೪-೨೫ನೇ ಸಾಲಿನ ಲಾಭದಲ್ಲಿ ೧೩೫ ಕೋಟಿ ರೂಪಾಯಿಗಳ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿತು. ಸಂಸ್ಥೆಯ ಪರವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಮತ್ತು ಕೆಎಸ್‌ಡಿಎಲ್ ಅಧ್ಯಕ್ಷ ಅಪ್ಪಾಜಿ ನಾಡಗೌಡ, ಡಿವಿಡೆಂಡ್ ಅನ್ನು ಮುಖ್ಯಮಂತ್ರಿ ಅವರಿಗೆ ನೀಡಿದರು. ಸಚಿವ ಎಂ.ಬಿ.ಪಾಟೀಲ್ ಮಾತನಾಡಿ, ಕೆಎಸ್‌ಡಿಎಲ್ ಸಂಸ್ಥೆಯು ಕಳೆದ ಹಣಕಾಸು ವರ್ಷದಲ್ಲಿ ೧ ಸಾವಿರದ ೭೦೦ ಕೋಟಿ ರೂಪಾಯಿ ವಹಿವಾಟು ನಡೆಸಿ,

೪೫೧ ಕೋಟಿ ರೂಪಾಯಿ ಲಾಭ ಕಂಡಿದೆ. ಈ ಪೈಕಿ ನಿಯಮದಂತೆ ಶೇಕಡ ೩೦ರಷ್ಟು ಲಾಭಾಂಶವನ್ನು ಸರ್ಕಾರಕ್ಕೆ ನೀಡಲಾಗಿದೆ. ವಹಿವಾಟು, ಲಾಭ ಮತ್ತು ಲಾಭಾಂಶ ಮೂರರಲ್ಲೂ ಇದು ಸಾರ್ವಕಾಲಿಕ ದಾಖಲೆ ಆಗಿದೆ ತಿಳಿಸಿದ್ದಾರೆ. ಮುಂಬರುವ ವರ್ಷಗಳಲ್ಲಿ ಈ ಲಾಭಾಂಶ ಮತ್ತಷ್ಟು ಹೆಚ್ಚಲಿದೆ ಎಂದು ಅವರು ಹೇಳಿದ್ದಾರೆ.

<><><><>

ದೇಶದ ರೈತರು ಗುಣಮಟ್ಟದ ಉತ್ಪಾದನೆಗೆ ಹೆಚ್ಚು ಆದ್ಯತೆ ನೀಡುವಂತೆ ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಕಾರ್ಮಿಕ ಉದ್ಯೋಗ ಸಚಿವಾಲಯ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಕರೆ ನೀಡಿದ್ದಾರೆ. ಬೆಂಗಳೂರಿನ ನಿಮ್ಹಾನ್ಸ್ ನಲ್ಲಿ ಕೇಂದ್ರ ರೇಷ್ಮೆ ಮಂಡಳಿಯ ರಾಷ್ಟ್ರೀಯ ರೇಷ್ಮೆ ಹುಳು ಬೀಜ ಸಂಘಟನೆಯ ಸುವರ್ಣ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತ ದೇಶದ ಬಟ್ಟೆಗೆ ದೇಶ-ವಿದೇಶಗಳಲ್ಲಿ ಹೆಚ್ಚು ಬೇಡಿಕೆ ಇದೆ. ದೇಶದಲ್ಲಿನ ರೇಷ್ಮೆ ಬೇಡಿಕೆ ಕೊರತೆಯನ್ನು ನೀಗಿಸುವಂತೆ ರೈತರಿಗೆ ತಿಳಿಸಿದ್ದಾರೆ.

**ಧ್ವನಿ : ಶೋಭಾ ಕರಂದ್ಲಾಜೆ**

ಸಂಸದ ಡಾ. ಸಿ.ಎನ್. ಮಂಜುನಾಥ್ ಮಾತನಾಡಿ, ದೇಶದಲ್ಲಿ ಶೇಕಡ ೭೦ರಷ್ಟು ರೇಷ್ಮೆ ಉತ್ಪಾದನೆ ದಕ್ಷಿಣ ರಾಜ್ಯದಲ್ಲಿ ಆಗುತ್ತಿದ್ದು, ಈಶಾನ್ಯ ರಾಜ್ಯಗಳ ಕೊಡುಗೆ ಶೇಕಡ ೩೦ರಷ್ಟಿದೆ ಎಂದು ತಿಳಿಸಿದರು. ರೇಷ್ಮೆ ಉತ್ಪಾದನೆಯಲ್ಲಿ ಚೈನಾ ಮಾದರಿ ಅನುಸರಿಸುವಂತೆ ಕರೆ ನೀಡಿದರು. ಅಲ್ಲದೇ ರಾಜ್ಯಕ್ಕೆ ರೇಷ್ಮೆ ಕಾರೀಡಾರ್‌ನ ಅಗತ್ಯವನ್ನು ಪ್ರತಿಪಾದಿಸಿದರು.

**ಧ್ವನಿ : ಡಾ. ಸಿ.ಎನ್. ಮಂಜುನಾಥ್**

ಈ ಸಂದರ್ಭದಲ್ಲಿ ವಿಶೇಷ ಅಂಚೆ ಚೀಟಿಯನ್ನು ಬಿಡುಗಡೆ ಮಾಡಲಾಯಿತು.

<><><><>

ಬೆಂಗಳೂರಿನಲ್ಲಿ ಇಂದು ಭಾರತೀಯ ಅಂಚೆ ಇಲಾಖೆ ಹಾಗೂ ಕೇಂದ್ರ ಸರ್ಕಾರದ ಇಲಾಖೆಗಳ ಸಹಭಾಗಿತ್ವದೊಂದಿಗೆ ಉದ್ಯೋಗ ಮೇಳ ನೇಮಕಾತಿ ಅಭಿಯಾನದ ರಾಷ್ಟ್ರೀಯ ಸಮಾರಂಭ ರೋಜ್‌ಗಾರ್ ಮೇಳ ನಡೆಯಿತು. ಸಮಾರಂಭದಲ್ಲಿ ಮಾತನಾಡಿದ ಕೇಂದ್ರ ಕಾರ್ಮಿಕ ಮತ್ತು ಸೂಕ್ಷ್ಮ, ಸಣ್ಣ ಮಧ್ಯಮ ಉದ್ಯಮಗಳ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ, ದೇಶದ  ಒಟ್ಟು ೪೦ ಕಡೆಗಳಲ್ಲಿ ೫೧ ಸಾವಿರ ಮಂದಿಗೆ ನೇಮಕಾತಿ ಪತ್ರ ವಿತರಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಸಂಸದ ಪಿ.ಸಿ.ಮೋಹನ್ ಮಾತನಾಡಿ, ದೇಶ ಪ್ರಗತಿ ಕಂಡರೆ ಮಾತ್ರ ಉದ್ಯೋಗ ಸೃಷ್ಟಿ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಸಂದರ್ಭದಲ್ಲಿ ಒಟ್ಟು ೧೨೦ ಮಂದಿಗೆ ವಿವಿಧ ಇಲಾಖೆಗಳ ನೇಮಕಾತಿ ಪತ್ರಗಳನ್ನು ಸಚಿವೆ ಶೋಭಾ ಕರಂದ್ಲಾಜೆ ವಿತರಣೆ ಮಾಡಿದರು.

<><><><>

ಪ್ರಯಾಣಿಕರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಮತ್ತು ಹಬ್ಬದ ಸಂದರ್ಭದಲ್ಲಿ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ, ನೈಋತ್ಯ ರೈಲ್ವೆಯು ಸರ್.ಎಂ.ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು ಮತ್ತು ಬೀದರ್ ನಡುವೆ ಸಂಚರಿಸುವ ವಿಶೇಷ ಎಕ್ಸ್‌ಪ್ರೆಸ್ ರೈಲು ಸೇವೆಗಳ ಅವಧಿಯನ್ನು ವಿಸ್ತರಿಸಿದೆ. ರೈಲು ಸಂಖ್ಯೆ ೦೬೫೩೯ ಬೆಂಗಳೂರಿನಿಂದ ಬೀದರ್‌ಗೆ ಪ್ರತಿ ಶುಕ್ರವಾರ ಮತ್ತು ಭಾನುವಾರದಂದು ಇದೇ ೩೧ರವರೆಗೆ ಸಂಚರಿಸಲಿದೆ. ಈ ರೈಲು ಸೇವೆಯನ್ನು ನವೆಂಬರ್ ೨ ರಿಂದ ಡಿಸೆಂಬರ್ ೨೮ ರವರೆಗೆ ವಿಸ್ತರಿಸಲಾಗಿದೆ ಎಂದು ನೈಋತ್ಯ ರೈಲ್ವೆ ಪ್ರಕಟಣೆ ತಿಳಿಸಿದೆ.

<><><><>

ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಸಂಭವಿಸಿದ ಬಸ್ ಬೆಂಕಿ ದುರಂತದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೨೦ಕ್ಕೇರಿದೆ. ೨೧ ಪ್ರಯಾಣಿಕರು ತುರ್ತು ಬಾಗಿಲಿನ ಮೂಲಕ ಪ್ರಾಣಾಪಾಯದಿಂದ ಪರಾರಿಯಾಗಿದ್ದಾರೆ. ಬಸ್‌ನಲ್ಲಿ ಇಬ್ಬರು ಚಾಲಕರು

ಸೇರಿದಂತೆ ೪೩ ಮಂದಿ ಪ್ರಯಾಣಿಸುತ್ತಿದ್ದರು. ಮೃತರು ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ಉತ್ತರಪ್ರದೇಶ, ಒಡಿಶಾ ರಾಜ್ಯಕ್ಕೆ ಸೇರಿದವರಾಗಿದ್ದಾರೆ. ಬಸ್ ದುರಂತದಲ್ಲಿ ಬೆಂಗಳೂರಿನ ಪ್ರಯಾಣಿಕರನ್ನು ಪತ್ತೆ ಹಚ್ಚಲು ರಾಜ್ಯದ ಅಧಿಕಾರಿಗಳ ತಂಡ ಕರ್ನೂಲ್‌ಗೆ ತೆರಳಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಬಸ್‌ಗಳಿಗೆ ತುರ್ತು ಬಾಗಿಲುಗಳಿರಲಿಲ್ಲ. ಈ ಹಿಂದೆ ನಡೆದ ಹಲವು ದುರಂತಗಳ ನಂತರ ರಾಜ್ಯದ ಸರ್ಕಾರಿ ಬಸ್ ಹಾಗೂ ಖಾಸಗಿ ಸಂಸ್ಥೆಗೆ ಸೇರಿದ ೫೦ ಸಾವಿರಕ್ಕೂ ಹೆಚ್ಚು ಬಸ್‌ಗಳಲ್ಲಿ ಎರಡು ತುರ್ತು ಬಾಗಿಲುಗಳನ್ನು ಅಳವಡಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮೃತಪಟ್ಟ ಸಂತ್ರಸ್ತ ಕುಟುಂಬಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದು, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ರಾಜ್ಯಸಭೆಯ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು, ಬಸ್ ದುರಂತದಲ್ಲಿ ಸಾವನ್ನಪ್ಪಿದವರ ಕುಟುಂಬಕ್ಕೆ ಸಂತಾಪ ವ್ಯಕ್ತಪಡಿಸಿದ್ದಾರೆ. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><><><>

ಉತ್ತರಕನ್ನಡ ಜಿಲ್ಲೆಯಲ್ಲಿ ಹವಾಮಾನ ಇಲಾಖೆಯಿಂದ ನಾಳೆಯವರೆಗೆ ಆರೆಂಜ್ ಅಲರ್ಟ್ ಮುನ್ಸೂಚನೆ ನೀಡಲಾಗಿದೆ. ೪೫ ರಿಂದ ೫೫ ಕಿಲೋಮೀಟರ್ ವೇಗದಲ್ಲಿ ಸಮುದ್ರ ತೀರದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ. ಈ ಅವಧಿಯಲ್ಲಿ ಸಣ್ಣ ಹಾಗೂ ಮಧ್ಯಮ ದೋಣಿಗಳು ಸಮುದ್ರದಲ್ಲಿ ಮೀನುಗಾರಿಕೆಗೆ ಇಳಿಯದಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚಿಸಿದ್ದಾರೆ. ಜನರು ಮರಗಳ ಕೆಳಗೆ ಆಶ್ರಯ ಪಡೆಯಬಾರದು.

ಶಿಥಿಲವಾದ ಕಟ್ಟಡದಲ್ಲಿ ವಾಸಿಸುತ್ತಿರುವ ಜನರು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳುವಂತೆ ತಿಳಿಸಿದ್ದಾರೆ.

<><><><>

ನವೆಂಬರ್ ೨ ರಂದು ಕಲಬುರಗಿಯ ಚಿತ್ತಾಪುರದಲ್ಲಿ ಪಾದಯಾತ್ರೆಗೆ ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಹೈಕೋರ್ಟ್‌ನ ಕಲಬುರಗಿ ಪೀಠ ಇಂದು ವಿಚಾರಣೆ ನಡೆಸಲಿದೆ. ಈ ಹಿಂದೆ, ಚಿತ್ತಾಪುರದಲ್ಲಿ ತನ್ನ ಶತಮಾನೋತ್ಸವ ಪಾದಯಾತ್ರೆ ನಡೆಸಲು ಅಧಿಕಾರಿಗಳು ಅನುಮತಿ ನಿರಾಕರಿಸಿದ್ದನ್ನು ಪ್ರಶ್ನಿಸಿ ಆರ್‌ಎಸ್‌ಎಸ್ ಅರ್ಜಿ ಸಲ್ಲಿಸಿತ್ತು. ನವೆಂಬರ್ ೨ ರಂದು ಅನುಮತಿ ಕೋರಿ ಅಧಿಕಾರಿಗಳಿಗೆ ಹೊಸ ಅರ್ಜಿಯನ್ನು ಸಲ್ಲಿಸುವಂತೆ ನ್ಯಾಯಾಲಯ ಆರ್‌ಎಸ್‌ಎಸ್‌ಗೆ ನಿರ್ದೇಶನ ನೀಡಿತ್ತು. ಬಳಿಕ ಭೀಮ್ ಆರ್ಮಿ, ದಲಿತ ಪ್ಯಾಂಥರ್ಸ್ ಮತ್ತು ಕುರುಬ ಸಮುದಾಯ ಸಂಘಟನೆಗಳು ಸಹ ಅದೇ ದಿನ ಮೆರವಣಿಗೆ ಮತ್ತು ಪಾದಯಾತ್ರೆ ನಡೆಸಲು ಅರ್ಜಿಗಳನ್ನು ಸಲ್ಲಿಸಿದ್ದವು.

<><><><>

ರಂಗ ಕಲಾವಿದ, ರಂಗನಿರ್ದೇಶಕ ಜೀವನ್ ರಾಮ್ ಸುಳ್ಯ ಅವರ ತಂದೆ ಹಿರಿಯ ಯಕ್ಷಗಾನ ಕಲಾವಿದ, ರಂಗಮನೆಯ ಸುಜನಾ ಸುಳ್ಯ ಇಂದು ಮುಂಜಾನೆ ನಿಧನ ಹೊಂದಿದ್ದಾರೆ. ಸುಜನಾ ಸುಳ್ಯ ಎಂದೇ ಪ್ರಸಿದ್ಧರಾಗಿದ್ದ ಸುಳ್ಯ ಜಯರಾಮ ನಾವೂರು ಅವರು ಯಕ್ಷರಂಗದ ಬಹುಮುಖ ಪ್ರತಿಭೆಯ ಕಲಾವಿದರಾಗಿದ್ದರು. ತೆಂಕುತಿಟ್ಟಿನ ಪ್ರಸಿದ್ಧ ಹಾಸ್ಯಗಾರರಾಗಿದ್ದ ಅವರು ಸುಳ್ಯ ತಾಲೂಕಿನ 'ರಂಗಮನೆ' ಎಂಬ ಕಲಾ ಕೇಂದ್ರದ ರೂವಾರಿ ಮತ್ತು ನಿರ್ದೇಶಕ ಜೀವನ್‌ರಾಮ್ ಸುಳ್ಯ ಅವರ ತಂದೆ. ಯಕ್ಷಗಾನ ಮತ್ತು ರಂಗಭೂಮಿ ಸೇರಿದಂತೆ ವಿವಿಧ ಸಾಂಸ್ಕ ತಿಕ ಚಟುವಟಿಕೆಗಳಲ್ಲಿಯೂ ಸುಜನಾ ತೊಡಗಿಸಿಕೊಂಡಿದ್ದರು. ಮೃತರ ನಿಧನಕ್ಕೆ ನಾಡಿನ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹೆಸರು ನೋಂದಾಯಿಸಲು ಡಿಸೆಂಬರ್ ೧೫ ಕೊನೆಯ ದಿನವಾಗಿದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಳ್ಳುವಂತೆ ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮದ ಜಿಲ್ಲಾ ವ್ಯವಸ್ಥಾಪಕ ಪ್ರಸಾದ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>